**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. 441/2023**

| | | |
|---|---|---|
| ಸಾಕ್ಷಿಯ ಹೆಸರುಃ | ರವಿಕುಮಾರ್. ವಿ | ಪ್ರಾಸಾಃ 4 |
| ತಂದೆ ಹೆಸರುಃ | ವೆಂಕಟೇಗೌಡ | ಚಾಸಾಃ 7 |
| ವಯಸ್ಸುಃ | 50 ವರ್ಷ | ಪ್ರಮಾಣೀಕರಿಸಿದ ದಿಃ 01.04.2026 |
| ಉದ್ಯೋಗಃ | ಎ ಎಸ್ ಐ, ಪಿರಿಯಾಪಟ್ಟಣ ಪೊಲೀಸ್ ಠಾಣೆ, | |
| ವಾಸಸ್ಥಳಃ | ಪಿರಿಯಾಪಟ್ಟಣ | |

**ಮುಖ್ಯ ವಿಚಾರಣೆಃ** ಮಾನ್ಯ ಸಸಅ ರವರಿಂದಃ

ನಾನು 2016 ರಿಂದ 2023 ರವರೆಗೆ ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಹೆಚ್.ಸಿ–217 ಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 30.03.2023 ರಂದು ನಾನು ಠಾಣೆ ಉಸ್ತುವಾರಿಯಲ್ಲಿದ್ದಾಗ ಮ. 12.00 ಗಂಟೆ ಸಮಯದಲ್ಲಿ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠ ಮೊ. 65/2023 ರಂತೆ ಕಲಂ 32 ಮತ್ತು 34 ರ ಕೆ ಇ ಆಕ್ಟ್ ಪ್ರಕಾರ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಚಾಸಾ–1 ರವರು ಸ್ಥಳದಲ್ಲಿ ಜರುಗಿಸಿದ ಸ್ಥಳ ಮಹಜರು ಮತ್ತು ಅಮಾನತ್ತು ಪಡಿಸಿಕೊಂಡಿದ್ದ 90 ಎಂ.ಎಲ್.ನ 292 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಟೆಟ್ರಾ ಪ್ಯಾಕೇಟ್ ಗಳನ್ನು ಮತ್ತು ಒಂದು ಪ್ಲಾಸ್ಟಿಕ್ ಚೀಲವನ್ನು ವಶಕ್ಕೆ ಪಡೆದುಕೊಂಡು ಪಿ ಎಫ್ ನಂ. 53/2023 ರಲ್ಲಿ ನಮೂದಿಸಿರುತ್ತೇನೆ. ಅದರಲ್ಲಿ 30 ಟೆಟ್ರಾ ಪ್ಯಾಕೇಟ್ ಗಳನ್ನು ಸೀಲು ಮಾಡಿರುತ್ತಾರೆ. ಚಾಸಾ–1 ರವರು ವಶಪಡಿಸಿಕೊಂಡಿದ್ದ ಆರೋಪಿತನನ್ನು ನನ್ನ ಮುಂದೆ ಹಾಜರು ಪಡಿಸಿದ್ದು ಆತನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ರಿಮ್ಯಾಂಡ್ ಅರ್ಜಿಯೊಂದಿಗೆ

ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ಅದೇ ದಿನ ಪಂಚರಾದ ಚಾಸಾ- 2 ಮತ್ತು 3 ಹಾಗೂ ಸಿಬ್ಬಂದಿಗಳಾದ ಚಾಸಾ-4 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಸ್ಥಳ ದಲ್ಲಿ ಫೋಟೋ ತೆಗೆದ ಚಾಸಾ-4 ರವರ ಕಲಂ 65(ಬಿ) ಭಾ ಸಾ ಅಧಿನಿಯಮ ರಡಿಯಲ್ಲಿ ಧೃಡೀಕರಣ ಪತ್ರವನ್ನು ಸ್ವೀಕರಿಸಿರುತ್ತೇನೆ.

3. ದಿಃ 11.04.2023 ರಂದು ಅಮಾನತ್ತು ಪಡಿಸಿಕೊಂಡಿದ್ದ 30 ಟೆಟ್ರಾ ಪ್ಯಾಕೇಟ್ ಗಳನ್ನು ಚಾಸಾ-5 ರವರ ಮುಖಾಂತರ ರಾಸಾಯನಿಕ ಪರೀಕ್ಷೆಗೆ RFSL ಮೈಸೂರಿಗೆ ಕಳುಹಿಸಿರುತ್ತೇನೆ.

4. ದಿಃ 20.04.2023 ರಂದು FSL ವರದಿಯನ್ನು ಚಾಸಾ-5 ರವರು ತಂದು ಹಾಜರುಪಡಿಸಿರುತ್ತಾರೆ. ನನಗೆ ವರ್ಗಾವಣೆ ಯಾದ್ದರಿಂದ ಚಾಸಾ-8 ರವರಿಗೆ ಮುಂದಿನ ತನಿಖೆಯನ್ನು ವಹಿಸಿಕೊಟ್ಟಿರುತ್ತೇನೆ.

5. ಸಾಕ್ಷಿಯು ನಿಪಿ-1 ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಡಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ವ ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.6** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.6(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.7** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.7(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಪಿ ಎಫ್ 55/2023 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.8** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.8(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಕಲಂ 65(ಬಿ) ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.9** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.9(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು RFSL ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.10** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು

**ನಿ.ಪಿ.10(ಎ)** ಎಂದು ಗುರುತಿಸಲಾಯಿತು. ಆ ದಿನ ನನ್ನ ಮುಂದೆ ಹಾಜರುಪಡಿಸಿದ್ದ ಮಾಲುಗಳು ಈ ದಿನ ನ್ಯಾಯಾಲಯದ ಮುಂದಿರುತ್ತವೆ. ಅವುಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಮು.ಮಾ–1 ಮತ್ತು 2 ಎಂದು ಗುರುತಿಸಲಾಗಿದೆ. ಆರೋಪಿತನನ್ನು ನೋಡಿದರೇ ಗುರುತಿಸುತ್ತೇನೆ. ಈ ದಿನ ಆರೋಪಿತ ಗೈರು ಹಾಜರಿದ್ದು, ಆತನ ಗುರುತಿನ ಬಗ್ಗೆ ಆರೋಪಿತ ಪರ ವಕೀಲರು ತಕರಾರು ಮಾಡಿರುವುದಿಲ್ಲ.

**ಪಾಟೀ ಸವಾಲುಃ** ಆರೋಪಿತರ **ಪರ ಶ್ರೀ** ಐ ಜಿ ಆರ್ **ವಕೀಲರಿಂದಃ**

6. ಚಾಸಾ–1 ರವರ ಹೇಳಿಕೆ ಆಧಾರದ ಮೇರೆಗೆ ನಾನು ಪ್ರಥಮ ವರ್ತಮಾನ ವರದಿವನ್ನು ದಾಖಲಿಸಿದ್ದೇನೆ ಎಂದರೆ ಸರಿ. ಚಾಸಾ–1 ರವರು ಈಗ ಜಯಪುರ ಪೊಲೀಸ್ ಠಾಣೆ ಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಚಾಸಾ–1 ರವರು ಸುಳ್ಳು ಹೇಳಿಕೆ ವರದಿಯನ್ನು ನೀಡಿದ್ದಾರೆ ಎಂದರೆ ಸರಿಯಲ್ಲ. ಚಾಸಾ–1 ರವರಿಗೆ ಆರೋಪಿತನಿಂದ ಯಾರು ಮದ್ಯವನ್ನು ಖರೀದಿಸುತ್ತಿದ್ದರು ಎಂದು ಕೇಳಿ ತಿಳಿದುಕೊಂಡಿಲ್ಲ. ಖರೀದಿದಾರರನ್ನು ನಾನು ದೊಷಾರೋಪಣಾ ಪಟ್ಟಿಯಲ್ಲಿ ಕಾಣಿಸಿಲ್ಲ, ಕಾರಣ ಆಗ ಖರೀದಿದಾರರು ಯಾರು ಇರಲಿಲ್ಲ. ಆರೋಪಿತ ಯಾವುದೇ ಮದ್ಯವನ್ನು ಮಾರಾಟ ಮಾಡದಿದ್ದರೂ ಸುಳ್ಳು ಪ್ರಕರಣವನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಮಹಜರು ಮಾಡಿದ ಸ್ಥಳಕ್ಕೆ ಬೇಟಿ ನೀಡಿಲ್ಲ ಮತ್ತು ಅದರ ಬಗ್ಗೆ ಮಾಹಿತಿ ಇದೆ. ಎಲ್ಲಾ ಟೆಟ್ರಾ ಪ್ಯಾಕೇಟ್ ಗಳನ್ನು ರಾಸಾಯನಿಕ ಪರೀಕ್ಷೆಗೆ ಒಳಪಡಿಸಲು ತೊಂದರೆ ಇರಲಿಲ್ಲ, ಕಾರಣ 30 ಟೆಟ್ರಾ ಪ್ಯಾಕೇಟ್ ಗಳನ್ನು ಮಾತ್ರ ಸೀಲು ಮಾಡಿ ತಂದಿದ್ದರು. ಮದ್ಯದ ತಯಾರಿಕಾ ದಿನಾಂಕ ಗೊತ್ತಿಲ್ಲ. ಚೀಲ ಬಿಳಿ ಬಣ್ಣದಾಗಿದ್ದು ಅದು ಯಾವ ಕಂಪನಿಗೂ ಸೇರಿಲ್ಲ. ಆರೋಪಿತ ಯಾವುದೇ ಮದ್ಯವನ್ನು ಮಾರಾಟ ಮಾಡದಿದ್ದರೂ ಈ ಪ್ರಕರಣಕ್ಕಾಗಿ ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನಿಪಿ–5 ರಲ್ಲಿ ದಿನಾಂಕ ನಮೂದಿಸಿಲ್ಲ ಎಂದರೆ ಸರಿ. ನಿಪಿ–5 ಅನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ.

ಚಾಸಾ–2 ಮತ್ತು 3 ರವರನ್ನು ಈ ಪ್ರಕರಣಕ್ಕಾಗಿ ಅನುಕೂಲ ಆಗಲು ಸಾಕ್ಷಿದಾರರನ್ನಾಗಿ ಮಾಡಿದ್ದೇವೆ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತು ಕೇಳಿ ಮತ್ತು ನಮ್ಮ ಇಲಾಖಾ ಅಂಕಿ ಅಂಶಕ್ಕೋಸ್ಕರ ಸುಳ್ಳು ಪ್ರಕರಣ ದಾಖಲಿಸಿ, ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತ ಯಾವ ಮದ್ಯದ ಅಂಗಡಿಯಿಂದ ಟೆಟ್ರಾ ಪ್ಯಾಕೇಟ್ ಗಳನ್ನು ಖರೀದಿಸಿದ್ದರು ಎಂದು ನಾನು ತನಿಖೆ ಮಾಡಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿರುವ ಎಲ್ಲ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಪಿರಿಯಾಪಟ್ಟಣ.